ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 5-3-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಬೆಂಗಳೂರು ಟಿವಿ ಜರ್ನಲಿಸ್ಟ್ಸ್ ಅಸೋಸಿಯೇಷನ್ ಉದ್ಘಾಟನಾ ಸಮಾರಂಭ:<br><br>ಉದ್ಘಾಟನೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯ ಅತಿಥಿಗಳು, ಕರ್ನಾಟಕ ಸರ್ಕಾರ<br><br>ಮುಖ್ಯ ಅತಿಥಿಗಳು:<br><br>ಶ್ರೀ ಆರ್. ರೋಷನ್ ಬೇಗ್,<br>ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವರು<br><br>ಅಧ್ಯಕ್ಷತೆ:<br><br>ಡಾ: ಚಂದ್ರಶೇಖರ ಕಂಬಾರ,<br>ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು | 6-3-2016<br>ಭಾನುವಾರ<br>ಬೆಳಿಗ್ಗೆ<br>11-00 ಗಂಟೆಗೆ | ಪ್ರೆಸ್‌ಕ್ಲಬ್ ಆವರಣ<br>ಕಬ್ಬನ್ ಉದ್ಯಾನವನ<br>ಬೆಂಗಳೂರು |
| 2 | ಮುಖ್ಯಮಂತ್ರಿಗಳ ಸಾಂತ್ವನ ಯೋಜನೆ ಚಾಲನಾ ಸಮಾರಂಭ:<br><br>ನೂತನ ಯೋಜನೆಗೆ ಚಾಲನೆ:<br><br>ಶ್ರೀ ಸಿದ್ದರಾಮಯ್ಯ<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ | 8-3-2016<br>ಮಂಗಳವಾರ<br>ಬೆಳಿಗ್ಗೆ<br>10-00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ವಿಧಾನ ಸೌಧ,<br>ಬೆಂಗಳೂರು |

| | | | |
|---|---|---|---|
| | ಪ್ರಾಸ್ತಾವಿಕ ನುಡಿ:<br><br>ಶ್ರೀ ಯು.ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು<br><br>ಅಧ್ಯಕ್ಷತೆ:<br><br>ಶ್ರೀ ಆರ್. ರೋಷನ್‌ಬೇಗ್,<br>ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವರು<br><br>ಕೈಪಿಡಿ ಬಿಡುಗಡೆ:<br><br>ಡಾ: ಶರಣ ಪ್ರಕಾಶ್ ಆರ್. ಪಾಟೀಲ್,<br>ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು | | |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ರಾಷ್ಟ್ರೀಯ ಸೇವಾ ಯೋಜನೆ 2014-15ನೇ ಸಾಲಿನ ರಾಜ್ಯ ಪ್ರಶಸ್ತಿ ಪ್ರದಾನ

**ಬೆಂಗಳೂರು, ಮಾರ್ಚ್ 5 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಸೇವಾ ಯೋಜನೆಯ 2014-15ನೇ ಸಾಲಿನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವು ರಾಜಭವನದ ಬ್ಯಾಂಕ್ವೆಟ್ ಹಾಲಿನಲ್ಲಿ ನಡೆಯಿತು. ರಾಜ್ಯಪಾಲ ಶ್ರೀ ವಜುಬಾಯಿ ವಾಲಾ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು ಪ್ರಶಸ್ತಿಯೊಂದೇ ಶ್ರೇಷ್ಠತೆಯ ಮಾನದಂಡವಲ್ಲ. ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ನಿಜವಾಗಿಯೂ ತೊಡಗಿಸಿಕೊಂಡಾಗ ಮಾತ್ರ ನಿಸ್ವಾರ್ಥ ಮನೋಭಾವ ಬೆಳೆಯಲು ಸಾಧ್ಯ. ಫಲಾಪೇಕ್ಷೆಯಿಲ್ಲದೇ ಕಾರ್ಯವನ್ನು ಮಾಡುವುದೇ ನಿಜವಾದ ಸೇವೆ, ಇದನ್ನು ಸ್ವಯಂ ಸೇವಕರು ಅರ್ಥ ಮಾಡಿಕೊಳ್ಳಬೇಕು, ಪ್ರಶಸ್ತಿಯು ಕೇವಲ ಪ್ರೋತ್ಸಾಹ ಮಾತ್ರ ಎಂದರು. ಅವರು ಅತ್ಯುತ್ತಮ ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿಗಳು ಮತ್ತು ಸ್ವಯಂ ಸೇವಕರಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ಪ್ರಶಸ್ತಿ ಪುರಸ್ಕೃತರ ಕೈಪಿಡಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಚಿವರಾದ ಶ್ರೀ ಅಭಯಚಂದ್ರ ಜೈನ್ ಮಾತನಾಡಿ ಕರ್ನಾಟಕದ ರಾಷ್ಟ್ರೀಯ ಸೇವಾ ಯೋಜನೆಯ ಚಟುವಟಿಕೆಗಳು ಇತರ ರಾಜ್ಯಗಳಿಗೆ ಮಾದರಿಯಾಗಿವೆ. ಕರ್ನಾಟಕ ಸರ್ಕಾರವು ಹಲವು ವಿಶಿಷ್ಟ ಯೋಜನೆಗಳನ್ನು ರಾಷ್ಟ್ರೀಯ ಸೇವಾ ಯೋಜನೆಗಾಗಿ ಜಾರಿಗೊಳಿಸಿದೆ. ಅದರ ಯಶಸ್ಸು ಸ್ವಯಂಸೇವಕರಿಗೆ ಸಲ್ಲಬೇಕು ಎಂದರು.

ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಕಪಿಲ್‌ಮೋಹನ್, ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಕೆ.ಎಸ್.ರವೀಂದ್ರನಾಥ್ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದರು. ರಾಜ್ಯ ಸಂಪರ್ಕಾಧಿಕಾರಿ ಮತ್ತು ಪದನಿಮಿತ್ತ ಜಂಟಿ ಕಾರ್ಯದರ್ಶಿ ಡಾ.ಗಣನಾಥ ಶೆಟ್ಟಿ ಎಕ್ಕಾರು ಸ್ವಾಗತಿಸಿದರೆ ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯದ ಕುಲಸಚಿವ ಶ್ರೀ ನಾಗರಾಜ್ ವಂದಿಸಿದರು.

ಬಾಬು/ಕೆಎನ್‌ವಿ/ಕೆಎಂ

# ಬೇಕರಿ ತರಬೇತಿ

ಬೆಂಗಳೂರು, ಮಾರ್ಚ್ 5 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಬೇಕರಿ ತರಬೇತಿ ಕೇಂದ್ರದಿಂದ 4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿ ಉದ್ದಿಮೆದಾರರಿಗೆ ಮತ್ತು ಗೃಹಣಿಯರಿಗಾಗಿ ಆಯೋಜಿಸಲಾಗಿದೆ. ತರಬೇತಿಯು ದಿನಾಂಕ 08-03-2016 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್,ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು, ಪಿಜ್ಜಾ, ಡ್ಯಾನೀಶ್ ಫೆಸ್ಟರಿ ಹಾಗೂ ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು 560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080- 23513370 ಮೂಲಕ ಸಂಪರ್ಕಿಸಬಹುದು.

ಬಾಬು/ಕೆಎಂ

# Baking Course

**Bangalore, March 5 (Karnataka Information)**

**The Bakery Training Unit, Hebbal, Bangalore is conducting 4 weeks training course on Bakery Technology for the benefit of Housewives and Entrepreneurs from 8$^{th}$ Mar 2016. Bakery products like special Biscuits, Bread Rolls, Puffs, Cakes and fancy items will be taught during the course. Participants will be allowed to learn by preparing the products by themselves.**

**The interested persons can contact Coordinator in person or through telephone no. 23513370.**

**babu/km**

## ಮಹದಾಯಿ ಜಲ ವಿವಾದ : ಪ್ರಧಾನಿ ಬಳಿಗೆ ಸರ್ವಪಕ್ಷಗಳ ಮುಖಂಡರ ನಿಯೋಗವನ್ನು ಮತ್ತೊಮ್ಮೆ ಕರೆದೊಯ್ಯಲು ಸಿದ್ಧ

ಬೆಂಗಳೂರು, ಮಾರ್ಚ್ 5 (ಕರ್ನಾಟಕ ವಾರ್ತೆ) :

ಮಹದಾಯಿ ಯೋಜನೆ ಕುರಿತ ಅಂತಾರಾಜ್ಯ ಜಲ ವಿವಾದವನ್ನು ನ್ಯಾಯಾಲಯದ ಹೊರಗೆ ರಾಜೀ ಸಂಧಾನದ ಮೂಲಕ ಬಗೆಹರಿಸಲು ಮಧ್ಯ ಪ್ರವೇಶಿಸುವಂತೆ ಕೋರಿ ಸರ್ವ ಪಕ್ಷಗಳ ಮುಖಂಡರ ನಿಯೋಗವನ್ನು ಪ್ರಧಾನ ಮಂತ್ರಿಯವರ ಬಳಿ ಮತ್ತೊಮ್ಮೆ ಕರೆದೊಯ್ಯಲು ಸರ್ಕಾರ ಸಿದ್ಧ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರಾಜ್ಯ ವಿಧಾನ ಸಭೆಯಲ್ಲಿ ಶನಿವಾರ ಪ್ರಕಟಿಸಿದರು.

ರಾಜ್ಯಪಾಲರು ಜಂಟಿ ಅಧಿವೇಶನದಲ್ಲಿ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾಡಿದ ಭಾಷಣ ಕುರಿತು ವಂದನಾ ನಿರ್ಣಯದ ಸಂದರ್ಭದಲ್ಲಿ ವಿಷಯಗಳಿಗೆ ಸದಸ್ಯರು ಮಂಡಿಸಿದ ಉತ್ತರಿಸುತ್ತಿದ್ದ ಶ್ರೀ ಸಿದ್ದರಾಮಯ್ಯ ಅವರು ಭಾರತದ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಅಂತಾರಾಜ್ಯ ಜಲ ವಿವಾದ ಕಾಯಿದೆ–1956ರ ಅಡಿಯಲ್ಲಿ ರಚಿಸಿರುವ ನ್ಯಾಯಾಧಿಕರಣದ ಮುಂದೆ ಗೋವಾ ಸರ್ಕಾರವು ಸಲ್ಲಿಸಿರುವ ತಕರಾರು ಅರ್ಜಿಯನ್ನು ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ಮುಖ್ಯಮಂತ್ರಿಗಳ ಸಭೆಯನ್ನು ಕರೆದು ಮಾತುಕತೆಯ ಮೂಲಕ ಬಗೆಹರಿಸಲು ಪ್ರಧಾನ ಮಂತ್ರಿಯವರ ಮಧ್ಯಸ್ಥಿಕೆಯಿಂದ ಮಾತ್ರ ಸಾಧ್ಯ ಎಂದು ಹೇಳಿದರು.

ಹುಬ್ಬಳ್ಳಿ ಮತ್ತು ಧಾರವಾಡ ನಗರಗಳಿಗೆ 7.56 ಟಿ ಎಂ ಸಿ ಕುಡಿಯುವ ನೀರು ಪೂರೈಸಲಿರುವ ಈ ಯೋಜನೆಯನ್ನು ಮಾನವೀಯತೆಯ ದೃಷ್ಠಿಯಿಂದ ಪರಿಗಣಿಸಬೇಕು. ಕಳೆದ ಮೂರೂವರೆ ದಶಕಗಳಿಂದಲೂ ನೆನಗುದಿಗೆ ಬಿದ್ದಿರುವ ಈ ಯೋಜನೆಗೆ ಆಧ್ಯತೆಯ ಮೇರೆಗೆ ಪರಿಗಣಿಸಿ ಚಾಲನೆ ನೀಡಬೇಕು ಎಂಬ ಸದುದ್ದೇಶದಿಂದ ಸರ್ವಪಕ್ಷಗಳ ಮುಖಂಡರ ನಿಯೋಗವನ್ನು

ಕಳೆದ ಆಗಸ್ಟ್ 24 ರಂದು ಪ್ರಧಾನಿ ಬಳಿಗೆ ಕರೆದೊಯ್ಯಲಾಗಿತ್ತು. ಆದರೆ, ಪ್ರಧಾನಿ ಭೇಟಿಯ ಸಂದರ್ಭದಲ್ಲಿ ಪ್ರತಿಪಕ್ಷ ಭಾರತೀಯ ಜನತಾ ಪಕ್ಷದ ಮುಖಂಡರು ಮೌನ ಮುರಿಯಲಿಲ್ಲ ಎಂದು ತಿಳಿಸಿದರು.

ವಿಷಯವು ನ್ಯಾಯಾಧಿಕರಣದಲ್ಲಿ ವಿಚಾರಣಾ ಹಂತದಲ್ಲಿದ್ದರೂ, ರಾಜೀ ಸಂಧಾನಕ್ಕೆ ಯಾವುದೇ ಕಾನೂನು ತೊಡಕುಗಳಿಲ್ಲ. ತೆಲುಗು ಗಂಗಾ ಯೋಜನೆಯ ಅನುಷ್ಠಾನ ಸಂದರ್ಭದಲ್ಲಿ ಅಂದಿನ ಪ್ರಧಾನ ಮಂತ್ರಿ ಶ್ರೀಮತಿ ಇಂದಿರಾ ಗಾಂಧಿ ಅವರ ಮಧ್ಯಸ್ಥಿಕೆಯಿಂದ ಆಂಧ್ರ ಪ್ರದೇಶ, ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ಕರೆದು ಕೃಷ್ಣಾ ನದಿಯಿಂದ ಚನ್ನೈ ಮಹಾನಗರಕ್ಕೆ ಕುಡಿಯುವ ನೀರು ಒದಗಿಸುವ ಮಹತ್ವದ ನಿರ್ಧಾರ ಕೈಗೊಂಡಿರುವ ಉತ್ತಮ ಉದಾಹರಣೆ ನಮ್ಮ ಮುಂದಿದೆ ಎಂದು ಸ್ಮರಿಸಿದ ಮುಖ್ಯಮಂತ್ರಿಯವರು ಅದೇ ಮಾದರಿಯಲ್ಲಿ, ಇಂದಿನ ಪ್ರಧಾನ ಮಂತ್ರಿಯವರು ಮನಸ್ಸು ಮಾಡಿದಲ್ಲಿ ಈ ಯೋಜನೆಗೂ ಹಸಿರು ನಿಶಾನೆ ದೊರಕಿಸಿಕೊಡಬಹುದು ಎಂಬ ಆಶಾಭಾವನೆ ವ್ಯಕ್ತಪಡಿಸಿದರು.

**********

ಡಿ ಪಿ ಎಂ

## ಕರ್ನಾಟಕ ಕೃಷಿ ಬೆಲೆ ಆಯೋಗದಲ್ಲಿ ಸಿಬ್ಬಂದಿ ನೇಮಕಾತಿ

**ಬೆಂಗಳೂರು, ಮಾರ್ಚ್ 5 (ಕರ್ನಾಟಕ ವಾರ್ತೆ)**

ಕೃಷಿ ಬೆಲೆ ಆಯೋಗಕ್ಕೆ ಅಗತ್ಯವಿರುವ ಒಬ್ಬರು ತಾಂತ್ರಿಕ ಸಹಾಯಕರ ಹುದ್ದೆಯನ್ನು ಒಪ್ಪಂದದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಷರತ್ತಿಗೆ ಒಳಪಟ್ಟು ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿಯನ್ನು ನಿಗಧಿತ ನಮೂನೆಯಲ್ಲಿ 08-03-2016 ರೊಳಗಾಗಿ ಸೀಲು ಮಾಡಿದ ಲಕೋಟೆಯಲ್ಲಿ ಮುದ್ದಾಂ/ನೋಂದಣಿ ಅಂಚೆ ಮೂಲಕ ಸಲ್ಲಿಸಿವುದು. ತಡವಾಗಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗೆ ಕೃಷಿ ಇಲಾಖಾ Website http://raitamitra.kar.nic.in ನಲ್ಲಿ ಮಾಹಿತಿ ಪಡೆಯಬಹುದು. ಅರ್ಜಿಗಳನ್ನು Website ನಿಂದ Download ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ದಿನಾಂಕ:08-03-2016 ರಂದು ಸಂಜೆ 5.00 ಗಂಟೆ ಒಳಗಾಗಿ ಕರ್ನಾಟಕ ಕೃಷಿ ಬೆಲೆ ಆಯೋಗದ ಕಛೇರಿ, ಕೃಷಿ ಇಲಾಖಾ ಆವರಣ, ಶೇಷಾದ್ರಿ ರಸ್ತೆ, ಬೆಂಗಳೂರು ರವರಿಗೆ ತಲುಪಿಸುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕೃಷಿ ಬೆಲೆ ಆಯೋಗದ ಕಛೇರಿಯನ್ನು (ದೂರವಾಣಿ ಸಂಖ್ಯೆ: 080-22074118) ಸಂಪರ್ಕಿಸುವುದು.

ಬಾಬು/ಕೆಎಂ

# ನಮ್ಮದು ನಿಷ್ಕ್ರಿಯ ಸರ್ಕಾರ ಅಲ್ಲ, ಕ್ರಿಯಾಶೀಲ ಸರ್ಕಾರ : ಮುಖ್ಯಮಂತ್ರಿ ಸಮರ್ಥನೆ

**ಬೆಂಗಳೂರು, ಮಾರ್ಚ್ 5 ( ಕರ್ನಾಟಕ ವಾರ್ತೆ ) :**

ನಮ್ಮದು ನಿಷ್ಕ್ರಿಯ ಸರ್ಕಾರ ಅಲ್ಲ, ಕ್ರಿಯಾಶೀಲ ಸರ್ಕಾರ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರಾಜ್ಯ ವಿಧಾನ ಸಭೆಯಲ್ಲಿ ಇಂದು ಸಮರ್ಥಿಸಿಕೊಂಡರು.

ರಾಜ್ಯ ವಿಧಾನ ಮಂಡಲದ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಜ್ಯಪಾಲರು ಮಾಡಿದ ಭಾಷಣಕ್ಕೆ ವಂದನಾ ನಿರ್ಣಯ ಮಂಡಿಸುವ ಸಂದರ್ಭದಲ್ಲಿ ಪ್ರತಿಪಕ್ಷ ನಾಯಕ ಶ್ರೀ ಜಗದೀಶ್ ಶೆಟ್ಟರ್ ಅವರು ತಮ್ಮ ಸರ್ಕಾರವನ್ನು ನಿಷ್ಕ್ರಿಯ ಸರ್ಕಾರ ಎಂದು ಬಣ್ಣಿಸಿದ್ದಾರೆ. ತಮ್ಮ ಸರ್ಕಾರ ಇನ್ನೂ ಟೇಕಾಫ್ ಆಗಿಲ್ಲ ಎಂದು ಆರೋಪಿಸಿದ್ದಾರೆ. ಆದರೆ, ತಮ್ಮ ಸರ್ಕಾರ ಅಸ್ತಿತ್ವಕ್ಕೆ ಬಂದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮೊದಲನೇ ದಿನವೇ ಚುನಾವಣಾ ಪೂರ್ವದಲ್ಲಿ ಪ್ರಕಟಿಸಿದ್ದ ಪಕ್ಷದ ಪ್ರಣಾಳಿಕೆಯಲ್ಲಿನ 165 ಭರವಸೆಗಳಲ್ಲಿ ರಾಜ್ಯದ ಒಂದು ಕೋಟಿಗೂ ಹೆಚ್ಚು ಕುಟುಂಬಗಳಿಗೆ ಅನುಕೂಲವಾಗುವ ಅನ್ನಭಾಗ್ಯ, ಅಂಗನವಾಡಿ ಮಕ್ಕಳೂ ಒಳಗೊಂಡಂತೆ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಂದು ಕೋಟಿಗೂ ಹೆಚ್ಚು ಮಕ್ಕಳಿಗೆ ಕ್ಷೀರಭಾಗ್ಯ, ಸ್ವಯಂ ಉದ್ಯೋಗ ಯೋಜನೆಗಳ ಅಡಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪ ಸಂಖ್ಯಾತ ವರ್ಗದವರು ಪಡೆದ ಸಾಲ ಮನ್ನಾ ಋಣಮುಕ್ತ ಭಾಗ್ಯ, ಮನೆ ನಿರ್ಮಾಣಕ್ಕೆ ಸಹಾಯ ಧನ ಒದಗಿಸುವ ಸೂರು ಭಾಗ್ಯ ಸೇರಿದಂತೆ ಆರು ಪ್ರಮುಖ ಭರವಸೆಗಳನ್ನು ಈಡೇರಿಸುವ ದಿಟ್ಟ ನಿರ್ಧಾರ ಕೈಗೊಂಡದ್ದು, ತಮ್ಮ ಸರ್ಕಾರ ಟೇಕಾಫ್ ಆಗದಿದ್ದಲ್ಲಿ ಸಾಧ್ಯವಾಗುತ್ತಿತ್ತೇ ? ತಮ್ಮ ಸರ್ಕಾರ ನಿಷ್ಕ್ರಿಯವಾಗಿದ್ದಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಂದು ಲಕ್ಷ ಕೋಟಿ ರೂ ಮಾರುಕಟ್ಟೆ ಮೌಲ್ಯದ 5211 ಎಕರೆ ಭೂ ಒತ್ತುವರಿ ತೆರವು ಮಾಡಿಸಲು ಆಗುತ್ತಿತ್ತೇ ? ಎಂದು ಪ್ರಶ್ನಿಸಿದರು. ಅಲ್ಲದೆ, 165 ಭರವಸೆಗಳಲ್ಲಿ ತಮ್ಮ ಸರ್ಕಾರದ ಮೂರು ಆಯವ್ಯಯಗಳಲ್ಲಿ 100 ಭರವಸೆಗಳನ್ನು ಈಡೇರಿಸಿ, ನುಡಿದಂತೆ ನಡೆದಿದ್ದೇವೆ ಎಂದರು.

ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಯೋಜನಾ ವೆಚ್ಚದಲ್ಲಿ ಶೇಕಡಾ 24.1 ರಷ್ಟು ಅನುದಾನವನ್ನು ಮೀಸಲಿರಿಸಿ, ಅದನ್ನು ಈ ಸಮುದಾಯಗಳ ಶ್ರೇಯೋಭಿವೃದ್ಧಿಗಾಗಿ ಕ್ರಾಂತಿಕಾರಕ ಕಾಯಿದೆ ರೂಪಿಸಿದ ಕೀರ್ತಿ ತಮ್ಮ ಸರ್ಕಾರದ್ದಾಗಿದೆ. ಇದರಿಂದ ಈ ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿರಿಸಲಾಗಿದ್ದ ಅನುದಾನ ದುಪ್ಪಟ್ಟಾಗಿದೆ. ಮೊದಲು 2013-14 ನೇ ಸಾಲಿನಲ್ಲಿ ಈ ಯೋಜನೆಯಡಿ ಮೀಸಲಿದ್ದ ಅನುದಾನ 8,616 ಕೋಟಿ ರೂ, 2014-15 ನೇ ಸಾಲಿನಲ್ಲಿ ಈ ಮೊತ್ತ 15,834 ಕೋಟಿ ರೂ ಆಯಿತು. ಪ್ರಸಕ್ತ 2015-16 ನೇ ಸಾಲಿನಲ್ಲಿ ಈ ಮೊತ್ತ 16,356 ಕೋಟಿ ರೂ ಆಗಿದೆ ಎಂದು ಮುಖ್ಯಮಂತ್ರಿ ಅಂಕಿ-ಅಂಶಗಳನ್ನು ಒದಗಿಸಿದರು.

ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ಸಂವಿಧಾನದ ಪರಿಚ್ಛೇಧ 371–ಜೆ ಅನ್ವಯ ವಿಶೇಷ ಸ್ಥಾನಮಾನ ದೊರಕಿಸಿಕೊಡುವಲ್ಲಿ ತಮ್ಮ ಪಕ್ಷದ ಮುಖಂಡರ ಮನವಿಗೆ ಸ್ಪಂದಿಸಿದ ಅಂದಿನ ಯು ಪಿ ಎ ಸರ್ಕಾರ ಮಹತ್ತರ ಪಾತ್ರ ವಹಿಸಿದೆ. ಅಲ್ಲದೆ, ಈ ಪ್ರದೇಶಕ್ಕೆ ಸಂವಿಧಾನಬದ್ಧವಾಗಿ ದೊರಕಿಸಿಕೊಡಬೇಕಾದ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ತಮ್ಮ ಸರ್ಕಾರ ಸ್ಪಂದಿಸುತ್ತಿದೆ. ಅಂತೆಯೇ, ಈ ಪ್ರದೇಶ ಅಭಿವೃದ್ಧಿಗಾಗಿ 2015–16 ರಲ್ಲಿ 1750 ಕೋಟಿ ರೂ. ಅನುದಾನ ಒದಗಿಸಿ, 830 ಕೋಟಿ ರೂ. ಬಿಡುಗಡೆ ಮಾಡಲಾಗಿದ್ದು, ಅರ್ಧದಷ್ಟು ಅನುದಾನ ವೆಚ್ಚವಾಗಿದೆ ಎಂಬ ಮಾಹಿತಿ ಇದೆ

ಗುಡಿಸಲು ಮುಕ್ತ ಕರ್ನಾಟಕದ ಕನಸನ್ನು ನನಸು ಮಾಡಲು ಹೊರಟಿರುವ ತಮ್ಮ ಸರ್ಕಾರ ವರ್ಷಕ್ಕೆ ಮೂರು ಲಕ್ಷ ಮನೆಗಳಂತೆ ಐದು ವರ್ಷಗಳಲ್ಲಿ 15 ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹೊಂದಿತ್ತು. ಅದರಂತೆ, 2013–14 ನೇ ಸಾಲಿನಲ್ಲಿ ಮೂರು ಲಕ್ಷ, 2014–15 ನೇ ಸಾಲಿನಲ್ಲಿ 3.17 ಲಕ್ಷ ಹಾಗೂ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆ ವ್ಯಾಪ್ತಿಯ 1.5 ಲಕ್ಷ ಮನೆಗಳೂ ಸೇರಿದಂತೆ 2015–16 ನೇ ಸಾಲಿನಲ್ಲಿ 4.5 ಲಕ್ಷ ಮನೆಗಳ ನಿರ್ಮಾಣ ಮಾಡಿದ್ದೇವೆ.

ಕಾವೇರಿ ಹಾಗೂ ಕೃಷ್ಣಾ ಕೊಳ್ಳದ ಎಲ್ಲಾ ನೀರಾವರಿ ಯೋಜನೆಗಳಿಗಾಗಿ ವರ್ಷಕ್ಕೆ ಹತ್ತು ಸಾವಿರ ಕೋಟಿ ರೂ ನಂತೆ 50,000 ಕೋಟಿ ರೂ ವೆಚ್ಚ ಮಾಡಬೇಕೆಂಬ ನಿರ್ಧಾರ ಕೈಗೊಂಡ ತಮ್ಮ ಸರ್ಕಾರ ಯೋಜಿಸಿದಂತೆಯೇ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಇವೆಲ್ಲವೂ ತಮ್ಮ ಸರ್ಕಾರದ ಕ್ರಿಯಾಶೀಲತೆಗೆ ಸಾಕ್ಷಿಯಲ್ಲವೇ ? ಎಂದು ಮುಖ್ಯಮಂತ್ರಿ ಸವಾಲು ಹಾಕಿದರು.

ಮುಂಗಾರು ಹಾಗೂ ಹಿಂಗಾರು ಕೈಕೊಟ್ಟಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ವಿದ್ಯುತ್ ಕೊರತೆ ಎದುರಾಗಿದೆ. ಆದರೆ, ಅದನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ತಮ್ಮ ಸರ್ಕಾರ ಎಲ್ಲಾ ಕ್ರಮಗಳನ್ನೂ ಕೈಗೊಳ್ಳುತ್ತಿದೆ. ಪ್ರತಿಪಕ್ಷ ನಾಯಕರು ಬಣ್ಣಿಸಿರುವಂತೆ ರಾಜ್ಯದಲ್ಲಿ ಕತ್ತಲೆ ಭಾಗ್ಯ ಇಲ್ಲ. ಬೇಸಿಗೆಯಲ್ಲೂ ಬೆಳಕಿನ ಭಾಗ್ಯ ಒದಗಿಸಲು ಕ್ರಮ ವಹಿಸಲಾಗಿದೆ ಎಂದರು.

***********

ಡಿ ಪಿ ಎಂ

# ಅಭಿನಂದನೆ

ಬೆಂಗಳೂರು, ಮಾರ್ಚ್ 5 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಬಂಜಾರ ತಾಂಡಾಗಳು, ಗೊಲ್ಲರಹಟ್ಟಿ, ಭೋವಿಹಟ್ಟಿ, ನಾಯಕರಹಟ್ಟಿ, ಸೋಲಿಗರ, ಕಾಡುಕುರುಬರು ಮುಂತಾದ ದುರ್ಬಲ ಸಮುದಾಯದವರು ವಾಸಿಸುವ ಹಲವು ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾರ್ಪಡಿಸಲು ರಾಜ್ಯ ಸರ್ಕಾರವು ಆದೇಶಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಜಲಜ ನಾಯ್ಕ್ ಅವರು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿದ್ದಾರೆ.

ಬಾಬು:ಜಿಪಿಆರ್.